ಕರ್ನಾಟಕ ಸರ್ಕಾರ ಸಿ ಆರ್ ಪಿ ಸಿ 67

ಹೇಳಿಕೆ ಹಾಳೆ

(ಆರ್.ಪಿ.ಸಂಖ್ಯೆ **57**)

ನಮೂನೆ ಸಂಖ್ಯೆ 4

## ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಸಿಂಧನೂರು.

## ಸಿ.ಸಿ.ನಂ.2739/2024

| | | | |
|---|---|---|---|
| **ಸಾಕ್ಷಿದಾರರ ಹೆಸರು** | **ಕುರುಬರ ಕುಮಾರ ಸ್ವಾಮಿ** | | |
| **ತಂದೆಃಹೆಸರು** | **ಹೊನ್ನೂರಪ್ಪ** | **ಪಿಡಬ್ಲೂಃ** | **05** |
| **ವಯಸ್ಸು** | **59 ವರ್ಷ** | **ಸಿಡಬ್ಲೂಃ** | **18** |
| **ಉದ್ಯೋಗಃ** | **ಪಿ ಎಸ್ ಐ** | | |
| **ವಾಸ ಸ್ಥಳಃ** | **ಅಚ್ಚೊಳ್ಳಿ ಪೋಲೀಸ್ ಠಾಣೆ, ಸಿರುಗುಪ್ಪ.** | | |

**ದಿನಾಂಕ 29-07-2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃಃ**

ನಾನು 2023 ರಿಂದ 2024 ರವರೆಗೆ ಸಿಂಧನೂರು ಸಂಚಾರಿ ಠಾಣೆಯಲ್ಲಿ ಪಿ ಎಸ್ ಐ ಅಂತಾ ಕರ್ತವ್ಯ ನಿರ್ವಹಿಸಿದ್ದೇನೆ.

ದಿನಾಂಕಃ08.07.2024 ರಂದು ರಾ. 10 ಗಂಟೆಗೆ ನಾನು ಠಾಣಾಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದಾಗ, ದೂರುದಾರರು ಠಾಣೆಗೆ ಹಾಜರಾಗಿ, ಕನ್ನಡದ ಗಣಕೀಕೃತ ದೂರನ್ನು ತಂದು ಹಾಜರುಪಡಿಸಿದ್ದು, ಸದರಿ ದೂರಿನ ಆಧಾರದ ಮೇಲೆ ಠಾಣಾ ಮೊಕದ್ದಮೆ ಸಂಖ್ಯೆ 39/2024 ಪ್ರಕರಣವನ್ನು ಕಲಂ.281, 106 ಬಿ. ಎನ್ ಸ್ ಅಡಿಯಲ್ಲಿ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ತಯಾರಿಸಿ ಮಾನ್ಯ ಘನ ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಯವರಿಗೆ ಸಲ್ಲಿಸಿರುತ್ತೇನೆ. ಸಾಕ್ಷಿಯು ನಿಪಿ-1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದರಲ್ಲಿನ ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು. ಸಾಕ್ಷಿಗೆ ಪ್ರಥಮ ವರ್ತಮಾನ

ವರದಿಯನ್ನು ತೋರಿಸಲಾಗಿ ಅದರಲ್ಲಿರುವ ತನ್ನ ಸಹಿಯನ್ನು ಗುರುತಿಸಿದ ಕಾರಣ ಪ್ರಥಮ ವರ್ತಮಾನ ವರದಿಯನ್ನು ನಿ.ಪಿ.17, ಸಾಕ್ಷಿಯ ಸಹಿಯನ್ನು ನಿ.ಪಿ.17(ಎ) ಎಂದು ಗುರುತಿಸಲಾಯಿತು.

ಮರು ದಿನ ಮೃತ ವ್ಯಕ್ತಿಯ ಗುರುತು ಪತ್ತೆ ಇಲ್ಲದ ಕಾರಣ, ಬಳ್ಳಾರಿಯ ವಿಮ್ಸ್ ಆಸ್ಪತ್ರೆಗೆ ಶವವನ್ನು ಶವಾಗಾರದಲ್ಲಿ ಇರಿಸಿಕೊಳ್ಳಲು ಮನವಿ ಮಾಡಿರುತ್ತೇನೆ. ನಂತರ ಮುಂದಿನ ತನಿಖೆಯನ್ನು ಚಾಸಾ-19 ರವರಿಗೆ ವಹಿಸಿಕೊಟ್ಟಿರುತ್ತೇನೆ. ಸಾಕ್ಷಿಯು 2 ದಾಖಲೆಗಳನ್ನು ನೋಡಿ ಗುರುತಿಸಿದ್ದು, ಅವುಗಳನ್ನು ನಿಪಿ-18 & 19 ಎಂದು, ಸಾಕ್ಷಿಯ ಸಹಿಗಳನ್ನು ನಿಪಿ-18 ಎ & 19 ಎ ಎಂದು ಗುರುತಿಸಲಾಯಿತು.

**ಪಾಟೀಸವಾಲುಃ ಆರೋಪಿತರ ಪರ ವಕೀಲರಿಂದಃ**

1. ನೀವು ಯಾವುದೇ ದೂರನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ನೀವು ಯಾವುದೇ ಪ್ರ. ವರದಿ ದಾಖಲಿಸಿಲ್ಲ, ಮೃತ ವ್ಯಕ್ತಿಯ ಪತ್ತೆ ಕುರಿತು ಯಾವುದೇ ಮನವಿ ಸಲ್ಲಿಸಿಲ್ಲ, ಪತ್ರಿಕಾ ಪ್ರಕಟಣೆ ಹೊರಡಿಸಿಲ್ಲ ಎಂದರೆ ಸರಿಯಲ್ಲ. ಮೃತರ ಕುಟುಂಬಕ್ಕೆ ಅನುಕೂಲ ಮಾಡಿಕೊಡಲು ಸುಳ್ಳು ಕೇಸನ್ನು ದಾಖಲಿಸಿಕೊಂಡು, ಸುಳ್ಳು ದಾಖಲೆಗಳನ್ನು ಸೃಷ್ಟಿಸಿದ್ದೀರಿ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಸಾಕ್ಷಿಯ ಹೇಳಿಕೆಯನ್ನು ಬೆರಳಚ್ಚು ಮಾಡಲಾಯಿತು.)**

**ಓ ಹೇ ಕೇ ಸ ಇದೆ.**

**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಸಿಂಧನೂರು.**